ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು–560065
* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 27.10.2020

## ಬೆಂಗಳೂರು ನಗರ ಜಿಲ್ಲೆಗೆ ಸೀಮಿತವಾಗಿದೆ.

### ಕಳೆದ ಐದು ದಿನಗಳ ಹವಾಮಾನ ಸಾರಂಶ

| ನಿಯತಾಂಕಗಳು | 23.10.20 | 24.10.20 | 25.10.20 | 26.10.20 | 27.10.20 |
|---|---|---|---|---|---|
| ಮಳೆ (ಮಿ ಮೀ) | 10.6 | 6.2 | 0 | 2.8 | 0 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 25.8 | 27.6 | 26.4 | 28.6 | 26.8 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 18.0 | 17.2 | 18.2 | 18.0 | 18.0 |
| ಮೋಡ ( ಪ್ರಮಾಣ) | 6 | 6 | 6 | 2 | 0 |
| ಆರ್ದ್ರತೆ 7.20 ಬೆ (ಶೇ) | 98 | 93 | 93 | 93 | 96 |
| ಆರ್ದ್ರತೆ 2.20 ಮ (ಶೇ) | 57 | 63 | 60 | 65 | -- |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 4.2 | 4.7 | 2.3 | 2.4 | 2.1 |
| ಗಾಳಿಯ ದಿಕ್ಕು ( ಡಿಗ್ರಿ) | 230 | 230 | 320 | 320 | 50 |

### ಈ ವಾರದ ಹವಾಮಾನ ಮುನ್ಸೂಚನೆ (ಭಾರತೀಯ ಹವಾಮಾನ ಇಲಾಖೆ)

(ದಿನಾಂಕ 28–10–2020 ರಿಂದ 01–11–2020 ವರೆಗೆ)

| ನಿಯತಾಂಕಗಳು | 28.10.2020 | 29.10.2020 | 30.10.2020 | 31.10.2020 | 01.11.2020 |
|---|---|---|---|---|---|
| ಮಳೆ (ಮಿ ಮೀ) | 0 | 0 | 1 | 2 | 1 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 30 | 30 | 31 | 31 | 31 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 19 | 19 | 18 | 18 | 18 |
| ಮೋಡ ( ಪ್ರಮಾಣ) | 3 | 3 | 4 | 5 | 5 |
| ಆರ್ದ್ರತೆ 7.20 ಬೆ (ಶೇ) | 80 | 80 | 80 | 81 | 81 |
| ಆರ್ದ್ರತೆ 2.20 ಮ (ಶೇ) | 51 | 51 | 51 | 52 | 52 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 2 | 3 | 2 | 2 | 2 |
| ಗಾಳಿಯ ದಿಕ್ಕು ( ಡಿಗ್ರಿ) | 63 | 32 | 56 | 103 | 112 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ 30.0–31.0 $^{o}$C ಮತ್ತು ಕನಿಷ್ಠ 18.0–19.0 $^{o}$ C ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ 80–81 % ಇದ್ದು ಮಧ್ಯಾಹ್ನ 51–52 % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 2–3 ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

**"ಸ್ವಾತಿ ಮಳ್ಯಾಗ ನೀರು ಹರಿದರೂ, ಬಿತ್ತೋದು ಬಿಡಬಾರ್ದು!"**

- ಸ್ವಾತಿ ಮಳೆಯು ಕಾಲವು ಅಕ್ಟೋಬರ್ ತಿಂಗಳ 24 ರಿಂದ ನವೆಂಬರ್ ತಿಂಗಳ 5 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 47.9 ಮಿ.ಮೀ. ವರೆಗೆ ಮಳೆಯಾಗುತ್ತದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|

| | |
|---|---|
| ಸಾಮಾನ್ಯ /ತೋಟಗಾರಿಕೆ ಬೆಳೆಗಳು | ➢ ಮೆಕ್ಕೆಜೋಳದ ಬೆಳೆಯಲ್ಲಿ ಕಾಂಡಕೊರಕದ ಬಾಧೆಯನ್ನು ತಡೆಗಟ್ಟಲು ಕ್ವಿನಾಲ್‌ಫಾಸ್ 25 ಇ.ಸಿ @ 2 ಮಿ. ಲೀ ಪ್ರತಿ ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸಿ ಅಥವಾ ಕ್ಲೋರೊಪೈರಿಫಾಸ್ 20 ಇ.ಸಿ @ 2 ಮಿ. ಲೀ ಪ್ರತಿ ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸಿ<br>➢ ಮೆಕ್ಕೆಜೋಳದಲ್ಲಿ ತೆನೆಯನ್ನು ತಿನ್ನುವ ಹುಳುವನ್ನು ನಿಯಂತ್ರಿಸಲು ಮ್ಯಾಲಥಿಯಾನ್ 50 ಇ.ಸಿ @ 2 ಮಿ. ಲೀ ಪ್ರತಿ ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸಿ.<br>➢ ತೊಗರಿ ಬೆಳೆಯಲ್ಲಿ ಮೊಗ್ಗು ಮತ್ತು ಹೂವಿನ ಹಂತದಲ್ಲಿ ಕಾಯಿಕೊರಕ ಹುಳುವಿನ ಜೈವಿಕ ಹತೋಟಿ ಮಾಡಲು ಎಕರೆಗೆ 200 ಎಲ್.ಇ ನಂಜು ರೋಗಾಣು (ಹೆಚ್.ಎ.ಎನ್.ಪಿ.ವಿ) ಗಳನ್ನು 400 ಲೀಟರ್ ನೀರಿನಲ್ಲಿ ಸೇರಿಸಿ ಶೇ.0.1 ಟೀಪಾಲ್ ಮತ್ತು ಶೇ. 0.5 ರ ಬೆಲ್ಲದ ಪಾಕವನ್ನು ಬೆರೆಸಿ ಸಾಯಂಕಾಲದ ಸಮಯದಲ್ಲಿ ಸಿಂಪಡಿಸಬೇಕು. ಇದರಿಂದ ಮರಿ ಹುಳುಗಳಿಗೆ ನಂಜಾಣು ರೋಗ ತಗಲಿ ತಲೆ ಕೆಳಗಾಗಿ ನೇತಾಡುತ್ತಾ ಸಾಯುತ್ತವೆ ಮತ್ತು ಹೆಲಿಕೊವರ್ಪ ಮೋಹಕ ಬಲೆಗಳನ್ನು ಹೆಕ್ಟೇರ್ ಗೆ 10 ನ್ನು ಬಳಸಬೇಕು ಹಾಗು 20 ದಿನಗಳಿಗೊಮ್ಮೆ ಮೋಹಕ ವಸ್ತು (ಲ್ಯೂರ್) ಬದಲಿಸಬೇಕು.<br>➢ ತೊಗರಿ ಬೆಳೆಯಲ್ಲಿ ಸೊರಗು ರೋಗದ ಹತೋಟಿಗೆ ಕಾರ್ಬೆನ್‌ಡೈಜಿಮ್ 50 ಡಬ್ಲ್ಯೂ. ಪಿ. 2 ಗ್ರಾಂ/ಲೀ ನೀರಿನಲ್ಲಿ ಬೆರೆಸಿ ಬುಡಕ್ಕೆ ಸುರಿಯಿರಿ.<br>➢ ಸೊರಗು ರೋಗದ ಗಿಡಗಳನ್ನು ಕಿತ್ತು ಒಂದೆಡೆ ಹಾಕಿ ಸುಡಬೇಕು.<br>➢ ತೊಗರಿಯಲ್ಲಿ ಗೂಡುಮಾರುಹುಳುವಿನ ಹತೋಟಿಗೆ ಹೂ ಬರುವ ಮೊದಲು ಕುಡಿಗಳ ಮೇಲೆ ಮಿಥೋಮಿಲ್ 40 ಎಸ್.ಪಿ 2 ಗ್ರಾಂ/ ನೀರಿನಲ್ಲಿ ಬೆರೆಸಿ ಸಿಂಪಡಿಸಿ.<br>**ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>➢ ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1, ಅವರೆ–ಎಚ್.ಎ–3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್–1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ–9 ಮತ್ತು ಕೆ.ಬಿ.ಎಚ್–1, ಹುಚ್ಚೆಳ್ಳು ತಳಿಗಳನ್ನು ಬಿತ್ತನೆ/ನಾಟಿ ಮಾಡುವುದು.<br><br>**ರಾಗಿ ಬೆಳೆಯಲ್ಲಿ ಬೆಂಕಿ ರೋಗವನ್ನು ಹತೋಟಿ ಮಾಡಲು ಸೂಕ್ತ ಕ್ರಮಗಳು.**<br>➢ ರಾಗಿ ಬಿತ್ತನೆಗೆ ಮುಂಚೆ 1 ಕೆ.ಗ್ರಾಂ ಬೀಜವನ್ನು 2 ಗ್ರಾಂ ಕಾರ್ಬೆನ್‌ಡೈಜಿಮ್ ಶಿಲೀಂಧ್ರನಾಶಕದಿಂದ ಬೀಜೋಪಚಾರ ಮಾಡಿ.<br>➢ ರಾಗಿ ಬೆಳೆಯಲ್ಲಿ ಪೈರುಗಳು ಒತ್ತೊತ್ತಾಗಿದ್ದಲ್ಲಿ ಬೆಂಕಿ ರೋಗ ತಗುಲಲು ಅನುಕೂಲವಾಗುತ್ತದೆ ಇದರ ನಿಯಂತ್ರಣಕ್ಕೆ ಒತ್ತಾಗಿರುವ ಕಡೆಗಳಲ್ಲಿ ಕುಂಟೆ ಹೊಡೆದು ಇಲ್ಲ ಹೆಚ್ಚಾಗಿರುವ ಕಡೆಗಳಲ್ಲಿ ಪೈರುಗಳನ್ನು ಕಿತ್ತು ಹಾಕಿ ಅಥವ ಅಂತರ ಬೇಸಾಯ ಮಾಡಿ ಕಳೆಗಳ ನಿಯಂತ್ರಣ ಮಾಡಿ ಮತ್ತು ಅಂತರ 30X10 ಸೆಂ.ಮೀ ಇರುವಂತೆ ನೋಡಿಕೊಳ್ಳಿ<br>➢ ಅತಿ ಹೆಚ್ಚು ರಸಗೊಬ್ಬರವನ್ನು ಕೊಡಬೇಡಿ ಮತ್ತು ಸಾರಜನಕ ಗೊಬ್ಬರದ ಅತೀ ಬಳಕೆಯನ್ನು ಕಡಿಮೆ ಮಾಡಿ ಎಕರೆಗೆ ಶಿಫಾರಸ್ಸು ಮಾಡಿರುವ ಗೊಬ್ಬರವನ್ನಷ್ಟನ್ನು ಕೊಡಿ.<br>➢ ಅಂತರ ಬೇಸಾಯ ಮಾಡಿ ಮತ್ತು ವಾರ್ಷಿಕ ಬೆಳೆ ಬದಲಾವಣೆ/ ಏಕ ಬೆಳೆ ಪದ್ಧತೆಯನ್ನು ಬದಲಾಯಿಸಿ ದ್ವಿದಳ ದಾನ್ಯಗಳನ್ನು ಬಿತ್ತನೆ ಮಾಡಿ ಇದರಿಂದ ಮಣ್ಣಿನ ಫಲವತ್ತತೆ ಹೆಚ್ಚಾಗುತ್ತದೆ ಮತ್ತು ಶಿಲೀಂಧ್ರದ ಬೆಳವಣಿಗೆ ಕಡಿಮೆಯಾಗುತ್ತದೆ.<br>➢ ರಾಗಿ ಬೆಳೆಯಲ್ಲಿ ಬೆಂಕಿ ರೋಗವನ್ನು ಹತೋಟಿ ಮಾಡಲು ಮ್ಯಾಂಕೋಜೆಬ್ @ 2 ಗ್ರಾಂ/ಲೀ. ನೀರಿನಲ್ಲಿ ಬೆರೆಸಿ ಸಿಂಪಡಿಸಿ ಅಥವ ಕಾರ್ಬೆನ್‌ಡೈಜಿಮ್@ 1 ಗ್ರಾಂ/ಲೀ. ನೀರಿನಲ್ಲಿ ಬೆರೆಸಿ ಸಿಂಪಡಿಸಿ |
| | **ಹೈನುಗಾರಿಕೆ** |
| ಪಶುಸಂಗೋಪನೆ | ➢ ಜಿಲ್ಲೆಯಲ್ಲಿ ಸೂಕ್ತವಾದ ಹವಾಮಾನ ಮತ್ತು ಯತೇಚ್ಛ ಮೇವು ಸಿಗುವುದರಿಂದ ಹೈನುಗಾರಿಕೆ, ಹಂದಿ ಸಾಕಾಣಿಕೆ, ಕುರಿ ಮತ್ತು ಮೇಕೆ ಸಾಕಾಣಿಕೆಗೆ ಅನುವು ಮಾಡಿಕೊಡುತ್ತದೆ.<br>➢ ಹೈನುಗಾರಿಕೆಯಲ್ಲಿ ರೋಗಗಳ ನಿಯಂತ್ರಣಕ್ಕೆ ಪ್ರತಿ ವರ್ಷ ಲಸಿಕೆಯನ್ನು ಮಾಡಿಸುವುದು ಉತ್ತಮ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**